1123 ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮಾಗಡಿ ವಿಧಾನ ಸಭಾ ಕ್ಷೇತ್ರದ ಸರ್ಕಾರಿ ಆಸ್ಪತ್ರೆಗಳಲ್ಲಿ ಉತ್ತಮ ಸೌಲಭ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ;

ಆ) ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮವೇನು ?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ. ಆದಾಗ್ಯೂ ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸಲು ಖಾಲಿ ಇರುವ ತಜ್ಞರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಕೋರಲಾಗಿದೆ. ಇತರೆ ಸಿಬ್ಬಂದಿಗಳನ್ನು ಸಹ ಆದ್ಯತೆಯ ಮೇಲೆ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ. ವೈದ್ಯರ ಹಾಗೂ ಸಿಬ್ಬಂದಿ ವಸತಿ ಗೃಹಗಳನ್ನು ದುರಸ್ತಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1125 (1668) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮಾಗಡಿ ಕ್ಷೇತ್ರದ ತಾವರೆಕೆರೆ ಹೋಬಳಿಯಲ್ಲಿ 2001–2002, 2002–2003, 2003–2004ನೇ ಸಾಲಿನಲ್ಲಿ ನಿವೇಶನ ಹಂಚಲು ಆಶ್ರಯ ಯೋಜನೆಯಡಿಯಲ್ಲಿ ಎಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ : (ವಿವರ ನೀಡುವುದು) ;

ಆ) ನಿವೇಶನ ರಹಿತರ ಪಟ್ಟಿಯನ್ನು ಗ್ರಾಮ ಸಭೆಯ ಮುಖಾಂತರ ಅನುಮೋದನೆ ಪಡೆಯಲಾಗಿದೆಯೆ : (ವಿವರ ನೀಡುವುದು) ;

ಇ) ನಿವೇಶನ ರಹಿತರಿಗೆ ಹಂಚಿರುವ ನಿವೇಶನಗಳಿಗೆ ನಿವೇಶನದ ನಕ್ಷೆ ತಯಾರಿಸಿದ್ದಾರೆಯೇ ;

ಈ) ನಿವೇಶನ ರಹಿತರಿಗೆ ಹಂಚಿಕೆಯ ಜಾಗದಲ್ಲಿ ಲೇ ಔಟ್ ಪ್ಲಾನ್ ಮಾಡಲಾಗಿದೆಯೇ : ಮಾಡದಿದ್ದಲ್ಲಿ ಯಾವ ರೀತಿ ನಿವೇಶನಗಳನ್ನು ಹಂಚಿದೆ ;

ಉ) ನಿವೇಶನ ವಿಂಗಡಿಸಿದೆಯೇ ಹಕ್ಕು ಪತ್ರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಊ) ಹಾಗಿದ್ದಲ್ಲಿ ಅದನ್ನು ಸರಿಪಡಿಸಲು ಸರ್ಕಾರದ ಕ್ರಮ ಏನು ;

ಋ) ತಾವರೆಕೆರೆ ಹೋಬಳಿಯಲ್ಲಿ ನಿವೇಶನದ ಹಂಚಿಕೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ, ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ;

ೠ) ಲೇ ಔಟ್ (ಬಡಾವಣೆ) ನಿರ್ಮಿಸದೆ ನಿವೇಶನಗಳನ್ನು ಹಂಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ?ಲ್ಲ

ಶ್ರೀ ಅಂಜನಮೂರ್ತಿ (ವಸತಿ ಸಚಿವರು) :

ಅ) ಮಾಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಸೇರಿದ ತಾವರೆಕೆರೆ ಹೋಬಳಿಯಲ್ಲಿ 2001–2002 ರಿಂದ 2003–2004ರ ಅವಧಿಯಲ್ಲಿ 2002–2003ರಲ್ಲಿ ಮಾತ್ರ ಅಜ್ಜನಹಳ್ಳಿ ಗ್ರಾಮದಲ್ಲಿ ಸರ್ವೆ ಸಂಖ್ಯೆ 58ರಲ್ಲಿ 2 ಎಕರೆ ಭೂಮಿಯನ್ನು ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆಗಾಗಿ ಮಾರುಕಟ್ಟೆ ದರ ನೀಡಿ ಸ್ವಾಧೀನಪಡಿಸಿಕೊಳ್ಳಲಾಗಿದೆ.